**ಅಸಲು ದಾವಾ ಸಂಖ್ಯೆ: 35/2026**

**ಪಿಡಬ್ಲೂ -1**

**ದಿಃ 02-06-2026 ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ. MAD ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ನಾನು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

ಉಪತಹಶೀಲ್ದಾರ ಬೆಳಗಾವಿ ಇವರು ನೀಡಿದ ಹಿಂಬರಹ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು,

ನನ್ನ ತಾಯಿ ಲಕ್ಷ್ಮೀಬಾಯಿ ಪಂಡಿತ ರವರ ಮರಣ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು,

ನನ್ನ ತಂದೆ ದೀನಾನಾತ ರವರ ಮರಣ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು,

ನನ್ನ ತಾಯಿ ಲಕ್ಷ್ಮೀಬಾಯಿ ರವರ ಆಧಾರ ಕಾರ್ಡ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು,

ನನ್ನ ಆಧಾರ ಕಾರ್ಡ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು,

ಕನ್ನಡ ಪ್ರಭಾ ದಿನಪತ್ರಿಕೆ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು, ಹಾಗೂ ಅದರಲ್ಲಿನ ಪತ್ರಿಕಾ ಪ್ರಕಟಣೆಯ ಭಾಗವನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಪ್ರತಿವಾದಿ ಪರ ವಕೀಲರಾದ ಮಾನ್ಯ ಡಿ.ಜಿ.ಪಿ ರವರಿಂದಃ-**

1. ಲಕ್ಷ್ಮೀಬಾಯಿ ದೀನಾನಾತ ಪಂಡಿತ ಎಂದರೆ ನನ್ನ ತಾಯಿ. ನನ್ನ ತಾಯಿ ಯಾವುದೇ ನೌಕರಿ ಮಾಡುತ್ತಿರಲಿಲ್ಲ. ನನ್ನ ತಂದೆಯ ಹೆಸರು ದೀನಾನಾತ ಪಂಡಿತ. ಅವರು 1999 ನೇ ಇಸವಿಯಲ್ಲಿ ಮರಣ ಹೊಂದಿರುತ್ತಾರೆ. ನನ್ನ ತಂದೆ ಮರಣ ಹೊಂದಿದ ನಂತರ ನಾನು ಅವರ

ವಾರಸಾ ಪ್ರಮಾಣ ಪತ್ರ ಪಡೆದಿರುವುದಿಲ್ಲ. ನನ್ನ ತಾಯಿ ಲಕ್ಷ್ಮೀಬಾಯಿ ರವರು 2024 ನೇ ಇಸವಿಯಲ್ಲಿ ಮರಣ ಹೊಂದಿರುತ್ತಾರೆ. ನಾನು 9ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ಲಕ್ಷ್ಮೀಬಾಯಿ ರವರ ತಂದೆ ತಾಯಿ ಮರಣಹೊಂದಿರುತ್ತಾರೆ. ನಾನು ಲಕ್ಷ್ಮೀಬಾಯಿ ರವರ ತಂದೆ ತಾಯಿಯ ಮರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿರುವುದಿಲ್ಲ. ನಾನು ವಾರಸಾ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸಿದಾಗ ತಹಶೀಲ್ದಾರ ರವರು ನನಗೆ ಹಾಗೂ ಲಕ್ಷ್ಮೀಬಾಯಿ ರವರಿಗೆ ಯಾವುದೇ ಸಂಬಂಧ ಇರುವುದಿಲ್ಲ ಎಂಬ ಕಾರಣಕ್ಕೆ ನನ್ನ ಅರ್ಜಿಯನ್ನು ತಿರಸ್ಕರಿಸಿರುತ್ತಾರೆ ಎಂದರೆ ಸರಿಯಲ್ಲ. ಲಕ್ಷ್ಮೀಬಾಯಿ ರವರು ನನಗೆ ತಾಯಿಯಾಗುತ್ತಾರೆ ಎಂದು ತೋರಿಸಲು ನಾನು ಯಾವುದೇ ದಾಖಲೆಯನ್ನು ಹಾಜರಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನನಗೆ ಹಾಗೂ ಲಕ್ಷ್ಮೀಬಾಯಿ ರವರಿಗೆ ಯಾವುದೇ ಸಂಬಂಧ ಇಲ್ಲದೇ ಇರುವ ಕಾರಣ ನಾನು ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಲಕ್ಷ್ಮೀಬಾಯಿ ಹಾಗೂ ದೀನಾನಾತ ರವರಿಗೆ ನಾನು ಒಬ್ಬನೇ ಮಗ ಆಗಿರುತ್ತೇನೆ. ದೀನಾನಾತ ರವರಿಗೆ ನಾನು ಒಬ್ಬನೇ ವಾರಸುದಾರ ಆಗಿರುವುದಿಲ್ಲ, ಅದೇ ಕಾರಣಕ್ಕೆ ನಾನು ಅವರ ವಾರಸಾ ಪ್ರಮಾಣ ಪತ್ರವನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಲಕ್ಷ್ಮೀಬಾಯಿ ರವರಿಗೆ ಮೊದಲನೇಯ ಗಂಡ ಹಾಗೂ ಮಕ್ಕಳು ಇರುವ ಕಾರಣ ಅವರೆಲ್ಲರೂ ಅವರ ವಾರಸಾದಾರರಾಗಿರುತ್ತಾರೆ ಎಂದರೆ ಸರಿಯಲ್ಲ. ಲಕ್ಷ್ಮೀಬಾಯಿ ರವರ ಹೆಸರಿನಲ್ಲಿ ಇರುವ ಆಸ್ತಿಗಳನ್ನು ಪಡೆಯುವ ದುರುದ್ದೇಶದಿಂದ ನಾನು ಅವರ ವಾರಸುದಾರರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಲಕ್ಷ್ಮೀಬಾಯಿ ರವರಿಗೆ ಯಾವುದೇ ರೀತಿಯಲ್ಲಿ ಸಂಬಂಧಿಕನಾಗಿಲ್ಲದೇ ಇದ್ದರೂ ಸಹ ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**Sd/-**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,**

**ಬೆಳಗಾವಿ.**